**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ,**

**ಟಿ.ನರಸೀಪುರ**

**ದಿನಾಂಕ 10 ನೇ ಡಿಸೆಂಬರ್ 2025**

**ಸಿಸಿ ಸಂಖ್ಯೆ 462/2024**

ಫಿರ್ಯಾದಿಃ : ರಾಜ್ಯದ ಪರವಾಗಿ ತಲಕಾಡು ಪೊಲೀಸ್ ಠಾಣೆ

ವಿರುದ್ಧ

ಆರೋಪಿಗಳು : 1. ಮಹೀಬ್,
ಬಿನ್ ಗಫರ್ ಶರೀಫ್,
ವಯಸ್ಸು 46 ವರ್ಷ,
ವಾಸಃ ನಂ.497, 1 ನೇ ಅಡ್ಡ ರಸ್ತೆ, ಕೆ.ಪಿ.ಮೊಹಲ್ಲಾ,
ಚಾಮರಾಜನಗರ ಟೌನ್.

2. ಸೈಯದ್ ಅಹಮದ್,
ವಯಸ್ಸು 44 ವರ್ಷ,
ವಾಸಃ ಬಳೇಪೇಟೆಸ್ಟ್ರೀಟ್, ವಾರ್ಡ್ ನಂ.11, ಯಳಂದೂರು
ಟೌನ್, ಚಾಮರಾಜನಗರ.

**ದೋಷಾರೋಪಣೆ**

ಶ್ರೀಮತಿ ಎನ್.ನಿವೇದಿತಾ, 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.

ಮೊದಲನೆಯದಾಗಿ, ದಿಃ 04/11/2022 ರಂದು ಸಂಜೆ 5.30 ಗಂಟೆ ಸಮಯದಲ್ಲಿ, ತಲಕಾಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ, ತೊಟ್ಟವಾಡಿ ಗ್ರಾಮದ ಗೇಟ್

ಬಳಿ ಚಾಸಾ.2 ಮತ್ತು 3 ರವರು ರಸ್ತೆಗಾವಲು ನಡೆಸುತ್ತಿದ್ದಾಗ, 1 ನೇ ಆರೋಪಿಯಾದ ನೀವು ಕೆಎ–19–ಬಿ–0837 ನಂಬರಿನ 407 ಟೆಂಪೋದಲ್ಲಿ ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ವ್ಯವಸ್ಥೆ (ನಿಯಂತ್ರಣ) ಆದೇಶ–2016 ಕಲಂ.18 ನ್ನು ಉಲ್ಲಂಘನೆ ಮಾಡಿ, ಯಾವುದೇ ರಹದಾರಿ ಇಲ್ಲದೆ ಅಕ್ರಮವಾಗಿ 88,704/ ರೂ ಬೆಲೆ ಬಾಳುವ ಸಾರ್ವಜನಿಕ ವಿತರಣಾ ವ್ಯವಸ್ಥೆಗೆ ಸಂಬಂದಿಸಿದ 96 ಪ್ಲಾಸ್ಟಿಕ್ ಚೀಲಗಳಲ್ಲಿ ಅಕ್ಕಿಯನ್ನು ಕಲಿಯೂರು ಗ್ರಾಮದ ಕಡೆಯಿಂದ ಟಿ.ನರೀಪುರದ ಕಡೆಗೆ ಸಾಗಾಣಿಕೆ ಮಾಡುತ್ತಿದ್ದು, ಹಾಗೂ 2 ನೇ ಆರೋಪಿಯಾದ ನೀವು ಸದರೀ ಅಕ್ಕಿ ಚೀಲಗಳನ್ನು ಮೇಲ್ಕಂಡ ವಾಹನಕ್ಕೆ ತುಂಬಿಸಿ 1 ನೇ ಆರೋಪಿಯ ಜೊತೆ ಕಳುಹಿಸಿಕೊಟ್ಟಿದ್ದು, ಆ ಮೂಲಕ ಆರೋಪಿತರಾದ ನೀವು ಅಗತ್ಯ ಸರಕುಗಳ ಕಾಯ್ದೆ–1955 ಕಲಂ 5, 7, 3, 6(ಎ) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಆಪಾದಿಸಲಾಗಿದೆ.

ಪ್ರಶ್ನೆಃ ಈಗ ಓದಿ ಹೇಳಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರಃ1 ನೇ ಆರೋಪಿಃ

ಉತ್ತರಃ2 ನೇ ಆರೋಪಿಃ

ಪ್ರಶ್ನೆಃ ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆಯಾಗಬೇಕಾ?

ಉತ್ತರಃ1 ನೇ ಆರೋಪಿಃ

ಉತ್ತರಃ2 ನೇ ಆರೋಪಿಃ

(ಈ ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನಾನು ನನ್ನ ಸ್ವಂತ ಬರಹದಲ್ಲಿ ದಾಖಲು ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**